ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಮಂಗಳವಾರ, ದಿನಾಂಕ : 17 ನೇ ಮಾರ್ಚ್, 2020

ಅಕ್ರಮ ಮರಳು ಗಣಿಗಾರಿಕೆ ಬಗ್ಗೆ

ಶ್ರೀ ಐವನ್ ಡಿ' ಸೋಜಾ(ನಾಮನಿರ್ದೇಶನ ಹೊಂದಿದವರು):-

1047 (1250) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2017-18, 2018-19 ಮತ್ತು 2019-20ರಲ್ಲಿ ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಅಕ್ರಮ ಗಣಿಗಾರಿಕೆ ಬಗ್ಗೆ (ಮರಳು) ಕೇಸುಗಳನ್ನು ದಾಖಲಿಸಲಾಗಿದೆ ; (ವಿವರ ನೀಡುವುದು)

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಎಷ್ಟು ಅಕ್ರಮ ಗಣಿಗಾರಿಕೆಯ ಪ್ರದೇಶಗಳನ್ನು ಗುರುತಿಸಲಾಗಿದೆ ಮತ್ತು ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿದ್ದು, ಜಿಲ್ಲಾ ಆಡಳಿತ, ಪೊಲೀಸ್ ಇಲಾಖೆ ಮತ್ತು ಗಣಿ ಇಲಾಖೆ ಸಂಪೂರ್ಣವಾಗಿ ಸಹಕರಿಸುತ್ತಿದ್ದು ಈ ಅಕ್ರಮ ನಡೆಯುತ್ತಿದ್ದರೂ, ಇದನ್ನು ನಿಲ್ಲಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುತ್ತಿಲ್ಲವೆಂಬ ದೂರುಗಳಿರುವುದು ನಿಜವೇ; ಪ್ರಸ್ತುತ ಮರಳು ಗಣಿಗಾರಿಕೆಗೆ ಎಷ್ಟು ಮಂದಿಗೆ ಅನುಮತಿ ನೀಡಲಾಗಿದೆ? (ವಿವರ ನೀಡುವುದು)